# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಆಸ್ತಿಗಳಿಗೆ ಸಂಬಂಧಿಸಿದಂತೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ 9 ಮತ್ತು 11ಎ ನೀಡುವ ಬಗ್ಗೆ.

ಓದಲಾಗಿದೆ:
1) ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 83 ಗ್ರಾಪಂಅ 2013, ದಿನಾಂಕ: 14-06-2013.
2) ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 83 ಗ್ರಾಪಂಅ 2013 (ಭಾ-6) ದಿನಾಂಕ: 21-01-2014.
3) ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 83 ಗ್ರಾಪಂಅ 2013 (ಭಾ-6) ದಿನಾಂಕ: 03-02-2014.
4) ದಿನಾಂಕ: 15-02-2018 ರಂದು ನಡೆದ ಸಚಿವ ಸಂಪುಟ ಸಭೆಯ ತೀರ್ಮಾನ.

====

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ಮತ್ತು (2) ರ ಸರ್ಕಾರದ ಅಧಿಸೂಚನೆಗಳು ಮತ್ತು ಕ್ರಮ ಸಂಖ್ಯೆ (3) ರ ಸುತ್ತೋಲೆಗಳಲ್ಲಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಆಸ್ತಿಗಳಿಗೆ ಸಂಬಂಧಿಸಿದಂತೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ 9, 11ಎ ಮತ್ತು 11 ಬಿ ಗಳನ್ನು ನೀಡಲು ಅವಕಾಶ ಕಲ್ಪಿಸಲಾಗಿದ್ದು, ಅದರಂತೆ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ನಮೂನೆ-9 11ಎ ಮತ್ತು 11ಬಿ ಅನ್ನು ಡಿಜಿಟಲ್ ಸಹಿಯ ಮೂಲಕ ವಿತರಿಸುವ ಬಗ್ಗೆ ವಿವರವಾದ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ. ಅದರಂತೆ ಇ-ಸ್ವತ್ತು ತಂತ್ರಾಂಶ ರೂಪಿಸಿ ಜಾರಿಗೊಳಿಸಲಾಗಿದೆ. ನಂತರ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಅನುಷ್ಠಾನದಲ್ಲಿ ಎದುರಾದ ಸಮಸ್ಯೆಗಳನ್ನು ನಿವಾರಿಸಲು ಕಾಲ ಕಾಲಕ್ಕೆ ಅವಶ್ಯ ಬದಲಾವಣೆಗಳನ್ನು ಮಾಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರ ದಿನಾಂಕ: 15-02-2018 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಇ-ಸ್ವತ್ತು ತಂತ್ರಾಂಶಕ್ಕೆ ಈ ಕೆಳಕಂಡಂತೆ ಬದಲಾವಣೆ ಮಾಡಲು ತೀರ್ಮಾನಿಸಿದೆ.

1) ದಿನಾಂಕ:14-06-2013 ರ ಪೂರ್ವದಲ್ಲಿ ಸೃಜನೆಯಾಗಿರುವ ಮತ್ತು ಗ್ರಾಮ ಪಂಚಾಯತಿಗಳು ನೀಡಿರುವ ಲೈಸೆನ್ಸ್ ಪಡೆದು ಖಾಯಂಯಾಗಿ ಈಗಾಗಲೇ ಮನೆ ನಿರ್ಮಾಣ ಮಾಡಿಕೊಂಡಿರುವ ಆಸ್ತಿಗಳಿಗೆ ಒಂದು ಬಾರಿಗೆ ಏಕನಿವೇಶನ ನಕ್ಷೆ ಅನುಮೋದನೆಯಿಂದ ವಿನಾಯಿತಿ ನೀಡಿ ನಮೂನೆ 9 ಮತ್ತು 11 ಎ ವಿತರಿಸುವುದು.
2) ಉತ್ತರ ಕನ್ನಡ ಜಿಲ್ಲೆಯಲ್ಲಿ ದಿನಾಂಕ:14-06-2013 ಕ್ಕಿಂತ ಪೂರ್ವದಲ್ಲಿ ಅರಣ್ಯ ಭೂಮಿಯಲ್ಲಿ ಮನೆ ನಿರ್ಮಾಣ ಮಾಡಿಕೊಂಡು ವಾಸವಾಗಿದ್ದು ಸದರಿ ಆಸ್ತಿಯನ್ನು ಕುಟುಂಬದ ಒಳಗೆ ವಿಭಾಗ ಮಾಡಿಕೊಳ್ಳುವವರಿಗೆ ಈ ಸ್ಥಳದ ಮೇಲಿನ ಅನುಭವದ ಬಗ್ಗೆ ಕಂದಾಯ ಇಲಾಖೆಯ ಉಪತಹಶೀಲ್ದಾರ್ ರವರು ನೀಡುವ ದೃಢೀಕರಣದ ಆಧಾರದ ಮೇಲೆ ಅವರಿಗೆ ನಿವೇಶನದ ಮೇಲೆ ಖಾಯಂ ಒಡೆತನವನ್ನಾಗಲಿ, ಪರಭಾರೆ, ಮಾರಾಟ ಮಾಡಲು ಅವಕಾಶವನ್ನಾಗಲಿ ನೀಡುವುದಿಲ್ಲ. ಕೇವಲ ಮನೆ ನಿರ್ಮಾಣ ಮಾಡಿಕೊಳ್ಳಲು ಸೀಮಿತವಾಗಿರುತ್ತದೆ ಎಂಬ ಷರತ್ತು ವಿಧಿಸಿ, ನಮೂನೆ-9 ಮತ್ತು 11ಎ ನೀಡುವುದು.

ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ : ಗ್ರಾಅಪ 956 ಗ್ರಾಪಂಅ 2016 (ಭಾಗ-1) ಬೆಂಗಳೂರು, ದಿನಾಂಕ:23-02-2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಈ ಕೆಳಕಂಡ ಆಸ್ತಿಗಳಿಗೆ ಸಂಬಂಧಿಸಿದಂತೆ ಇ-ಸ್ವತ್ತು ತಂತ್ರಾಂಶದ ಮೂಲಕ ನಮೂನೆ 9 ಮತ್ತು 11ಎ ನೀಡಲು ಸರ್ಕಾರವು ಆದೇಶಿಸಿದೆ.

1) ದಿನಾಂಕ:14-06-2013 ರ ಪೂರ್ವದಲ್ಲಿ ಸೃಜನೆಯಾಗಿರುವ ಮತ್ತು ಗ್ರಾಮ ಪಂಚಾಯತಿಗಳು ನೀಡಿರುವ ಲೈಸೆನ್ಸ್ ಪಡೆದು ಖಾಯಂಯಾಗಿ ಈಗಾಗಲೇ ಮನೆ ನಿರ್ಮಾಣ ಮಾಡಿಕೊಂಡಿರುವ ಆಸ್ತಿಗಳಿಗೆ ಒಂದು ಬಾರಿಗೆ ಏಕನಿವೇಶನ ನಕ್ಷೆ ಅನುಮೋದನೆಯಿಂದ ವಿನಾಯಿತಿ ನೀಡಿ ನಮೂನೆ 9 ಮತ್ತು 11 ಎ ವಿತರಿಸುವುದು.

2) ಉತ್ತರ ಕನ್ನಡ ಜಿಲ್ಲೆಯಲ್ಲಿ ದಿನಾಂಕ:14-06-2013 ಕ್ಕಿಂತ ಪೂರ್ವದಲ್ಲಿ ಅರಣ್ಯ ಭೂಮಿಯಲ್ಲಿ ಮನೆ ನಿರ್ಮಾಣ ಮಾಡಿಕೊಂಡು ವಾಸವಾಗಿದ್ದು ಸದರಿ ಆಸ್ತಿಯನ್ನು ಕುಟುಂಬದ ಒಳಗೆ ವಿಭಾಗ ಮಾಡಿಕೊಳ್ಳುವವರಿಗೆ ಈ ಸ್ಥಳದ ಮೇಲಿನ ಅನುಭವದ ಬಗ್ಗೆ ಕಂದಾಯ ಇಲಾಖೆಯ ಉಪತಹಶೀಲ್ದಾರ್ ರವರು ನೀಡುವ ದೃಢೀಕರಣದ ಆಧಾರದ ಮೇಲೆ ಅವರಿಗೆ ನಿವೇಶನದ ಮೇಲೆ ಖಾಯಂ ಒಡೆತನವನ್ನಾಗಲಿ, ಪರಭಾರೆ, ಮಾರಾಟ ಮಾಡಲು ಅವಕಾಶವನ್ನಾಗಲಿ ನೀಡುವುದಿಲ್ಲ. ಕೇವಲ ಮನೆ ನಿರ್ಮಾಣ ಮಾಡಿಕೊಳ್ಳಲು ಸೀಮಿತವಾಗಿರುತ್ತದೆ ಎಂಬ ಷರತ್ತು ವಿಧಿಸಿ, ನಮೂನೆ-9 ಮತ್ತು 11ಎ ನೀಡುವುದು.

ಮೇಲ್ಕಂಡಂತೆ ಗ್ರಾಮ ಪಂಚಾಯತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯು ಡಿಜಿಟಲ್ ಸಹಿಯ ಮೂಲಕ ನಮೂನೆ-9 ಮತ್ತು 11 ಎ ನೀಡತಕ್ಕದ್ದು. ಈ ಪ್ರಕ್ರಿಯೆಯಲ್ಲಿ ಯಾವುದೇ ರೀತಿಯ ಲೋಪವಾದಲ್ಲಿ ಸಂಬಂಧಪಟ್ಟ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

23/2/18

(ಎಂ.ಕೆ. ಕೆಂಪೇಗೌಡ)
ನಿರ್ದೇಶಕರು (ಪಂ.ರಾಜ್-1) ಹಾಗೂ
ಸರ್ಕಾರದ ಪದನಿಮಿತ್ತ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1) ಪ್ರಾದೇಶಿಕ ಆಯುಕ್ತರು, ಬೆಂಗಳೂರು, ಮೈಸೂರು, ಬೆಳಗಾವಿ ಮತ್ತು ಕಲಬುರಗಿ ವಿಭಾಗ.
2) ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
3) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,
4) ಎಲ್ಲಾ ಉಪಕಾರ್ಯದರ್ಶಿಗಳು, ಜಿಲ್ಲಾ ಪಂಚಾಯತಿಗಳು.
5) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
6) ಎಲ್ಲಾ ಕಂದಾಯ ವಿಭಾಗದ ಉಪ ವಿಭಾಗಾಧಿಕಾರಿಗಳು.
7) ಎಲ್ಲಾ ತಾಲ್ಲೂಕುಗಳ ತಹಶೀಲ್ದಾರ್‌ಗಳು.
8) ಎಲ್ಲಾ ಕಂದಾಯ ಇಲಾಖೆಯ ಉಪ ತಹಶೀಲ್ದಾರ್‌ಗಳು.
9) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

ಪ್ರತಿ: ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ.

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿ, (ವಿಪತ್ತು ನಿರ್ವಹಣೆ, ನೋಂದಣಿ ಮತ್ತು ಮುದ್ರಾಂಕ) ಕಂದಾಯ ಇಲಾಖೆ, ಬೆಂಗಳೂರು.
6. ನೋಂದಣಿ ಮಹಾಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರು, ನೋಂದಣಿ ಮತ್ತು ಮುದ್ರಾಂಕ ಇಲಾಖೆ, ಬೆಂಗಳೂರು.
7. ಹಿರಿಯ ತಾಂತ್ರಿಕ ನಿರ್ದೇಶಕರು, ಎನ್.ಐ.ಸಿ., ಬೆಂಗಳೂರು.
8. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿರವರು
9. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಯವರಿಗೆ.
10. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.